(2)

**<u>ಶ್ರೀ ಪ್ರಕಾಶ್ ಕೆ.ರಾಥೋಡ್, ಮಾನ್ಯ ವಿಧಾನ ಪರಿಷತ್ ಸದಸ್ಯರು ಇವರು ನಿಯಮ 72ರಡಿ ನೀಡಿರುವ ಸೂಚನೆಗೆ ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಉತ್ತರ</u>**

---

## ಸೂಚನೆ:-

**"ವಿಜಯಪುರ ಜಿಲ್ಲೆಯಲ್ಲಿ ಆಲಮಟ್ಟಿ ಜಲಾಶಯ, ಜಿಲ್ಲೆಯಾದ್ಯಂತ 250ಕ್ಕೂ ಹೆಚ್ಚು ಕೆರೆಗಳು ಹಾಗೂ ಡೋಣಿ ನದಿ ಸುಮಾರು 150 ಕಿ.ಮೀ. ಹರಿಯುತ್ತಿದ್ದು, ಈ ಭಾಗದಲ್ಲಿ ಹೆಚ್ಚಿನ ಮೀನುಗಾರರು ವಾಸವಾಗಿದ್ದು, ಜಲಾಶಯದ ಹಿನ್ನೀರಿನಿಂದ, ಇತರೆ ಕೆರೆಗಳಿಂದ ಹಾಗೂ ನದಿಯಿಂದ ಹೆಚ್ಚು ಮೀನುಗಾರಿಕೆ ಮಾಡಲು ಅವಕಾಶವಿರುವುದರಿಂದ, ಮೀನುಗಾರಿಕೆಗೆ ಉತ್ತೇಜನ ನೀಡಿ, ಅವರ ಜೀವನ ಮಟ್ಟವನ್ನು ಹೆಚ್ಚಿಸಲು ಅನುಕೂಲ ಮಾಡುವ ಕುರಿತು.**

## ಹೇಳಿಕೆ:-

ರಾಜ್ಯದಲ್ಲಿ ಮೀನುಗಾರಿಕೆ ಇಲಾಖೆ ವ್ಯಾಪ್ತಿಯಡಿ 3906 ಕೆರೆಗಳು ಹಾಗೂ 83 ಜಲಾಶಯಗಳಿದ್ದು, ಈ ಪೈಕಿ 3326 ಕೆರೆ / ಜಲಾಶಯಗಳ ಮೀನು ಪಾಶುವಾರು ಹಕ್ಕನ್ನು ಗುತ್ತಿಗೆ / ಟೆಂಡರ್-ಕಂ-ಹರಾಜು / ಪರವಾನಗಿ ಮೂಲಕ ವಿಲೇವಾರಿ ಮಾಡಿ, ಮೀನು ಸಾಕಾಣಿಕೆಗೆ ಅವಕಾಶ ಕಲ್ಪಿಸಲಾಗಿದೆ. 2020-21ನೇ ಸಾಲಿನಲ್ಲಿ ರಾಜ್ಯದಲ್ಲಿ ಒಳನಾಡು ಜಲಸಂಪನ್ಮೂಲಗಳಿಂದ ಸುಮಾರು 2.51 ಲಕ್ಷ ಟನ್‌ಗಳಷ್ಟು ಮೀನು ಉತ್ಪಾದನೆ ಆಗಿರುತ್ತದೆ.

40 ಹೆಕ್ಟೇರ್‌ಗಿಂತ ಹೆಚ್ಚು ಅಚ್ಚುಕಟ್ಟು ಹೊಂದಿರುವ ಕೆರೆಗಳ ಮೀನು ಪಾಶುವಾರು ಹಕ್ಕಿನ ವಿಲೇವಾರಿಯು ಮೀನುಗಾರಿಕೆ ಇಲಾಖೆ ವ್ಯಾಪ್ತಿಗೆ ಹಾಗೂ 40 ಹೆಕ್ಟೇರ್‌ಗಿಂತ ಕಡಿಮೆ ಅಚ್ಚುಕಟ್ಟು ಹೊಂದಿರುವ ಕೆರೆಗಳ (ಪಟ್ಟಣ ಪಂಚಾಯಿತಿ / ಪುರಸಭೆ / ನಗರ ಸಭೆ / ಮಹಾನಗರ ಪಾಲಿಕೆ / ಬಿ.ಬಿ.ಎಂ.ಪಿ. ವ್ಯಾಪ್ತಿ ಹೊರತುಪಡಿಸಿ) ಮೀನು ಪಾಶುವಾರು ಹಕ್ಕಿನ ವಿಲೇವಾರಿಯು ಸಂಬಂಧಪಟ್ಟ ಗ್ರಾಮ ಪಂಚಾಯಿತಿಗಳಿಗೆ ಒಳಪಟ್ಟಿರುತ್ತದೆ. ಇದಲ್ಲದೆ, ರಾಜ್ಯದಲ್ಲಿರುವ 83 ಜಲಾಶಯ ಹಾಗೂ ಸುಮಾರು 5853 ಕಿ.ಮೀ. ನದಿ ಭಾಗದಲ್ಲಿನ ಮೀನು ಪಾಶುವಾರು ಹಕ್ಕಿನ ವಿಲೇವಾರಿ ಸಹ ಮೀನುಗಾರಿಕೆ ಇಲಾಖಾ ವ್ಯಾಪ್ತಿಗೆ ಒಳಪಟ್ಟಿರುತ್ತದೆ. ಅರ್ಹ ಮೀನುಗಾರರ ಸಹಕಾರ ಸಂಘಗಳು ನೇರ ಗುತ್ತಿಗೆ ಮುಖಾಂತರ ಇಲಾಖಾ ವ್ಯಾಪ್ತಿಯ ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕನ್ನು ಗುತ್ತಿಗೆ ಕಾರ್ಯನೀತಿ-2014 ರನ್ವಯ ಗುತ್ತಿಗೆ ಮೊತ್ತ ಪಾವತಿಸಿ, 5 ವರ್ಷಗಳ ಅವಧಿಗೆ ಗುತ್ತಿಗೆಗೆ ಪಡೆದುಕೊಳ್ಳಲು ಅವಕಾಶವಿರುತ್ತದೆ. ಗುತ್ತಿಗೆಗೆ ವಿಲೇವಾರಿ ಮಾಡಲಾದ ನಂತರ ಬಾಕಿ ಉಳಿಯುವ ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕನ್ನು ಟೆಂಡರ್-ಕಂ-ಹರಾಜು ಮುಖಾಂತರ ವಿಲೇವಾರಿ ಮಾಡಲಾಗುತ್ತದೆ.

ವಿಜಯಪುರ ಜಿಲ್ಲೆ ವ್ಯಾಪ್ತಿಯಲ್ಲಿ ಆಲಮಟ್ಟಿ ಮತ್ತು ಬಸವಸಾಗರ ಜಲಾಶಯಗಳಿದ್ದು, ಅವುಗಳ ಜಲವಿಸ್ತೀರ್ಣ ಅನುಕ್ರಮವಾಗಿ 48787 ಹೆಕ್ಟೇರ್ ಮತ್ತು 13048 ಹೆಕ್ಟೇರ್ ಇರುತ್ತದೆ. ಗುತ್ತಿಗೆ ಕಾರ್ಯನೀತಿ-2014 ರ ಅನುಬಂಧ-3 ರನ್ವಯ ಸದರಿ ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕನ್ನು ಸ್ಥಳೀಯ ಮೀನುಗಾರರಿಗೆ ಪರವಾನಿಗೆ ಮೂಲಕ ವಿಲೇ ಮಾಡಲಾಗುತ್ತಿದೆ. 2020-21 ನೇ ಸಾಲಿನಲ್ಲಿ ಆಲಮಟ್ಟಿ ಜಲಾಶಯದಲ್ಲಿ 144 ಮೀನುಗಾರರಿಗೆ ಮತ್ತು ಬಸವಸಾಗರ ಜಲಾಶಯದಲ್ಲಿ 94 ಮೀನುಗಾರರಿಗೆ ಮೀನು ಹಿಡಿಯಲು ಪರವಾನಿಗೆ ವಿತರಿಸಲಾಗಿರುತ್ತದೆ. ಮೀನುಗಾರರ ಜೀವನ ಮಟ್ಟವನ್ನು ಹೆಚ್ಚಿಸುವ ಸಲುವಾಗಿ ಜಲಾಶಯ ಅಭಿವೃದ್ಧಿ ಯೋಜನೆಯಡಿ ಜಲಾಶಯಗಳಿಗೆ ಬಲಿತ ಬಿತ್ತನೆ ಮೀನುಮರಿಗಳನ್ನು ದಾಸ್ತಾನು ಮಾಡುವ ಮೂಲಕ ಅಭಿವೃದ್ಧಿಪಡಿಸಲಾಗುತ್ತಿದೆ.

ವಿಜಯಪುರ ಜಿಲ್ಲೆಯಲ್ಲಿ ಮೀನುಗಾರಿಕೆ ಉತ್ತೇಜಿಸಲು ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ವಿವರ:-

- ವಿಜಯಪುರ ಜಿಲ್ಲೆಯಲ್ಲಿ ಮೀನುಗಾರಿಕೆ ಇಲಾಖಾ ವ್ಯಾಪ್ತಿಯ 160 ಕೆರೆಗಳಿದ್ದು, 2021-22 ನೇ ಸಾಲಿನಲ್ಲಿ 137 ಕೆರೆಗಳ ಮೀನು ಪಾಶುವಾರು ಹಕ್ಕನ್ನು ಗುತ್ತಿಗೆ ಮತ್ತು ಟೆಂಡರ್-ಕಂ-ಹರಾಜು ಮುಖಾಂತರ ವಿಲೇವಾರಿ ಮಾಡಲಾಗಿದೆ ಹಾಗೂ ಸದರಿ ಕೆರೆಗಳಲ್ಲಿ 63.54 ಲಕ್ಷ ಮೀನುಮರಿಗಳನ್ನು ಬಿತ್ತನೆ ಮಾಡಲಾಗಿದೆ.

- “ಒಳನಾಡು ಮೀನು ಕೃಷಿಗೆ ಪ್ರೋತ್ಸಾಹ” ಯೋಜನೆಯಡಿ ರಾಜ್ಯದ ಜಲ ಪ್ರದೇಶದಲ್ಲಿ ಪ್ರತಿ ಹೆಕ್ಟೇರ್ ಉಪಯುಕ್ತತಾ ಜಲವಿಸ್ತೀರ್ಣಕ್ಕೆ 2000 ಬಲಿತ ಬಿತ್ತನೆ ಮೀನುಮರಿಗಳನ್ನು ಮೀನುಗಾರರ ಸಹಕಾರ ಸಂಘಗಳ ಬಲಪಡಿಸುವ ಉದ್ದೇಶದಿಂದ ಸಂಘಗಳ ಮುಖಾಂತರ ಉಚಿತವಾಗಿ ಬಿತ್ತನೆ ಮಾಡಿ ಒಳನಾಡು ಮೀನು ಉತ್ಪಾದನೆಯನ್ನು ಹೆಚ್ಚಿಸಲಾಗುತ್ತಿದೆ. 2021-22 ನೇ ಸಾಲಿನಲ್ಲಿ ವಿಜಯಪುರ ಜಿಲ್ಲೆಯ 13 ಕೆರೆಗಳಿಗೆ ರೂ.14.61 ಲಕ್ಷಗಳ ವೆಚ್ಚದಲ್ಲಿ 11.32 ಲಕ್ಷ ಬಲಿತ ಬಿತ್ತನೆ ಮೀನುಮರಿಗಳನ್ನು ದಾಸ್ತಾನು ಮಾಡಲಾಗಿದೆ.

- ಕೆರೆ / ಜಲಾಶಯಗಳ ಅಂಚಿನಲ್ಲಿ ನಿರ್ಮಿಸಿದ ಕೊಳಗಳಲ್ಲಿ ಮೀನುಮರಿ ಪಾಲನೆ ಮಾಡಲು ಪ್ರತಿ ಹೆಕ್ಟೇರ್ ಗೆ ರೂ.2.50 ಲಕ್ಷ ಸಹಾಯಧನ ನೀಡಲಾಗುತ್ತಿದೆ. 2021-22 ನೇ ಸಾಲಿನಲ್ಲಿ ವಿಜಯಪುರ ಜಿಲ್ಲೆಯ 07 ಫಲಾನುಭವಿಗಳಿಗೆ ರೂ. 4.18 ಲಕ್ಷಗಳ ಸಹಾಯಧನ ನೀಡಲು ಕ್ರಮವಹಿಸಲಾಗಿದೆ.

- ಜಲಾಶಯಗಳಲ್ಲಿ ಮೀನುಮರಿ ಬಿತ್ತನೆ ಯೋಜನೆಯಡಿ ಒಳನಾಡು ಮೀನು ಉತ್ಪಾದನೆಯನ್ನು ಹೆಚ್ಚು ಮಾಡಲು ಮತ್ತು ಮೀನುಗಾರರ ಆರ್ಥಿಕ ಮಟ್ಟವನ್ನು ಹೆಚ್ಚಿಸಲು ಜಲಾಶಯಗಳಿಗೆ ಬಲಿತ ಬಿತ್ತನೆ ಮೀನು ಮರಿಗಳನ್ನು ಬಿತ್ತನೆ ಮಾಡುವ ಮೂಲಕ ಮೀನುಗಾರಿಕೆ ಅಭಿವೃದ್ಧಿ ಕೈಗೊಳ್ಳಲಾಗುತ್ತಿದೆ. 2021-22ನೇ ಸಾಲಿನಲ್ಲಿ ವಿಜಯಪುರ ಜಿಲ್ಲೆ ವ್ಯಾಪ್ತಿಯ ಆಲಮಟ್ಟಿ ಜಲಾಶಯ ಮತ್ತು ಬಸವಸಾಗರ ಜಲಾಶಯಕ್ಕೆ ಕ್ರಮವಾಗಿ 13.98 ಲಕ್ಷ ಮತ್ತು 15.00 ಲಕ್ಷ ಬಲಿತ ಬಿತ್ತನೆ ಮೀನುಮರಿಗಳನ್ನು ದಾಸ್ತಾನು ಮಾಡಲಾಗಿದೆ.

- ಒಳನಾಡು ಮೀನುಗಾರರಿಗೆ ಮೀನು ಹಿಡಿಯಲು ಸಲಕರಣೆ ಕಿಟ್ ವಿತರಣೆ ಯೋಜನೆಯಡಿ ಸಲಕರಣೆ ಕಿಟ್ ಖರೀದಿಸಲು ಶೇ.100 ರಷ್ಟು ಸಹಾಯಧನ ನೀಡಲಾಗುತ್ತಿದೆ (ಘಟಕ ವೆಚ್ಚ – ರೂ.10,000/-). 2021-22 ನೇ ಸಾಲಿನಲ್ಲಿ ವಿಜಯಪುರ ಜಿಲ್ಲೆಯ 70 ಮೀನುಗಾರರಿಗೆ ಮೀನುಗಾರಿಕೆ ಸಲಕರಣೆ ಕಿಟ್ಟುಗಳನ್ನು ಉಚಿತವಾಗಿ ವಿತರಿಸಲಾಗಿದೆ.

- ಉತ್ತರ ಕರ್ನಾಟಕದ ಮೀನುಗಾರಿಕೆ ಅಭಿವೃದ್ಧಿಗಾಗಿ ಬಾಗಲಕೋಟೆಯಲ್ಲಿ ನಿಜಶರಣ ಶ್ರೀ ಅಂಬಿಗರ ಚೌಡಯ್ಯ ಒಳನಾಡು ಮೀನುಗಾರಿಕೆ ಅಭಿವೃದ್ಧಿ ಕೇಂದ್ರ ಸ್ಥಾಪನೆ ಮಾಡಲಾಗಿದ್ದು ಮೀನುಗಾರಿಕೆ ಅಭಿವೃದ್ಧಿಗಾಗಿ ಯೋಜನೆಗಳನ್ನು ರೂಪಿಸಲಾಗಿದೆ. 2021-22ನೇ ಸಾಲಿನಲ್ಲಿ ವಿಜಯಪುರ ಜಿಲ್ಲೆಯ ಆಲಮಟ್ಟಿ ಜಲಾಶಯದಲ್ಲಿ ಮೀನುಗಾರಿಕೆ ಅಭಿವೃದ್ಧಿ ಕೈಗೊಳ್ಳಲು ರೂ.60.00 ಲಕ್ಷ ಅನುದಾನಕ್ಕೆ ಕಾರ್ಯಕ್ರಮ ರೂಪಿಸಲಾಗಿದೆ.

- ಪ್ರಧಾನಮಂತ್ರಿ ಮತ್ಸ್ಯಸಂಪದ ಯೋಜನೆಯಡಿ ಮೀನುಗಾರಿಕೆಯ ಸರ್ವತೋಮುಖ ಅಭಿವೃದ್ಧಿಗಾಗಿ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. 2021-22ನೇ ಸಾಲಿನಲ್ಲಿ ಈ ಯೊಜನೆಯಡಿ ವಿಜಯಪುರ ಜಿಲ್ಲೆಯಲ್ಲಿ ರೂ.61.82 ಲಕ್ಷಗಳ ವೆಚ್ಚದಲ್ಲಿ 41 ಫಲಾನುಭವಿಗಳಿಗೆ ವಿವಿಧ ಚಟುವಟಿಕೆಗಳಿಗಾಗಿ ಸಹಾಯಧನ ನೀಡಲಾಗಿದೆ.

- ಜಿಲ್ಲಾ ವಲಯ ಯೋಜನೆ – ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ಸಹಾಯ ಯೋಜನೆಯಡಿ ಬಾವಿ ಮತ್ತು ಹೊಂಡಗಳಲ್ಲಿ ಮೀನು ಕೃಷಿ ಮಾಡುವ ರೈತರಿಗೆ ರೂ.13.00 ಲಕ್ಷಗಳ ವೆಚ್ಚದಲ್ಲಿ ಮೀನುಮರಿಗಳನ್ನು ಉಚಿತವಾಗಿ ನೀಡಲು ಯೋಜನೆ ಹಮ್ಮಿಕೊಳ್ಳಲಾಗಿದೆ.

- ಜಿಲ್ಲಾ ವಲಯ ಯೋಜನೆ ಮೀನು ಮಾರುಕಟ್ಟೆ ಮತ್ತು ಮೀನು ಮಾರಾಟಕ್ಕೆ ಸಹಾಯ ಯೋಜನೆಯಡಿ ರೂ.30.00 ಲಕ್ಷಗಳ ಅನುದಾನದಲ್ಲಿ 45 ಫಲಾನುಭವಿಗಳಿಗೆ ಸಹಾಯಧನ ನೀಡಲು ಯೋಜನೆ ಹಮ್ಮಿಕೊಳ್ಳಲಾಗಿದೆ.

---

ಸಂಖ್ಯೆ: ಪಸಂಮೀ ಇ-22 ಮೀಇಯೋ 2022

(ಎಸ್. ಅಂಗಾರ)
ಮೀನುಗಾರಿಕೆ, ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು